**ಸಾಕ್ಷಿಗೆ ದಿನಾಂಕಃ 11.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀಮತಿ ಹೆಚ್.ವೈ ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, ಮತ್ತು **ಪೋಲಿಸರಿಗೆ ನೀಡಿರುವ ದೂರನ್ನು** ಹಾಜರುಪಡಿಸಿದ್ದು ಅದನ್ನು **ನಿ.ಪಿ.2** ಎಂದು ಗುರುತಿಸಿದೆ.

3) ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ನಿ.ಪಿ.**3** ಎಂದು, ಐಎಂವಿ ವರದಿಯನ್ನು ನಿ.ಪಿ.**4** ಎಂದು, ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**5** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**6** ಎಂದು ಗುರುತಿಸಿದೆ.

4) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.**7** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**8** ಎಂದು ಮತ್ತು ಬಂಧಪತ್ರವನ್ನು ನಿ.ಪಿ.**9** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.**1** ರಿಂದ ನಿ.ಪಿ.**9** ಎಂದು ಗುರುತು ಆಗಿರುವ ದಾಖಲೆಗಳು ದೊಡ್ಡ ಬಳ್ಳಾಪುರ ಗ್ರಾಮಾಂತರ ಪೋಲೀಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

5) ಡಿಸ್ಚಾರ್ಜ್ ಸಮ್ಮರಿಗಳನ್ನು ನಿ.ಪಿ.**10** ಮತ್ತು ನಿ.ಪಿ.**11** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.**10** ಮತ್ತು ನಿ.ಪಿ.**11** ದಾಖಲೆಗಳು ತಲಾ **3** ಹಾಳೆಗಳನ್ನು ಒಳಗೊಂಡಿವೆ.

6) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್**,** ಚಾಲನಾ ಪರವಾನಗಿ ಮತ್ತು ಪಾನ್ ಕಾರ್ಡ್ ದಾಖಲೆಗಳನ್ನು ಮತ್ತು ಆರ್.ಸಿ ಕಾರ್ಡ್ ಅನ್ನು ಮತ್ತು ಇದೇ ದಾಖಲೆಗಳ ನೆರಳಚ್ಚು ಪ್ರತಿಗಳನ್ನು **(photo copies)** ಹಾಜರುಪಡಿಸಿದ್ದಾರೆ. ಸದರಿ ಮೂಲ ದಾಖಲೆಗಳನ್ನು ಮತ್ತು ನೆರಳಚ್ಚು ಪ್ರತಿಗಳನ್ನು **(photo copies)**

ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ನೆರಳಚ್ಚು ಪ್ರತಿಗಳನ್ನು **(photo copies)** ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ನೆರಳಚ್ಚು ಪ್ರತಿಗಳನ್ನು **(photo copies)** ನಿ.ಪಿ.**12** ರಿಂದ ನಿ.ಪಿ.**15** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.